**ದಿನಾಂಕಃ 06.07.2026 ರಂದು** ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ.ಪಿ.ಬಿ.ಎಸ್. ವಕೀಲರಿಂದಃ**

ನಿಪಿ.7 ರ ಕ್ರಯ ಪತ್ರದಲ್ಲಿರುವಂತೆ ಸ್ವಾಧೀನದಲ್ಲಿದ್ದರು ಸಹ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು 1ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ದಿಃ10.01.1994 ರ ಕ್ರಯ ಪತ್ರದಲ್ಲಿ ಸ.ನಂ.170 ರ ಬದಲಾಗಿ ಸ.ನಂ.168 ಎಂದು ತಪ್ಪಾಗಿ ನಮೂದಾಗಿರುವುದರಿಂದ ಸುಳ್ಳು ದಾವೆಯನ್ನು ಹಾಕಿರುತ್ತೇನೆ ಎಂದರೆ ಸರಿಯಲ್ಲ. ನಾನು ಸ.ನಂ.170 ರ ಸ್ವಾಧೀನದಲ್ಲಿ ಇಲ್ಲದೇ ಇದ್ದರು ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸ.ನಂ.168 ರ ಪೂರ್ತಿ ಸ್ವಾಧೀನದಲ್ಲಿರುತ್ತೇನೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಖರೀದಿ ಮಾಡಿರುವ ದಿಃ10.01.1994 ರ ಕ್ರಯ ಪತ್ರದಲ್ಲಿ ನನಗೆ ಯಾವುದೇ ಹಕ್ಕು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಹೆಚ್ಚುವರಿ ಹಿ.ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.
ಶಿರಾ.